**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2014-15ನೇ ಸಾಲಿಗೆ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯ ರಾಷ್ಟ್ರೀಯ ತಾಂತ್ರಿಕ ಸಲಹಾ ನೀತಿ (National Plan for Technical Assistance)ಯಡಿ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಘೋಷಣೆಯಾಗಿರುವ ಪ್ರೋತ್ಸಾಹಕ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

ಸರ್ಕಾರದ ಅಧೀನ ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ N-39011/82/2015-Pol.II ದಿನಾಂಕ: 6.04.2015.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದಲ್ಲಿ ಉತ್ತಮ ಸಾಧನೆ ಮಾಡಿರುವ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಪ್ರಶಸ್ತಿಗಳನ್ನು ನೀಡುವ ಉದ್ದೇಶದಿಂದ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು 2014-15ನೇ ಸಾಲಿಗೆ ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯ ರಾಷ್ಟ್ರೀಯ ತಾಂತ್ರಿಕ ಸಲಹಾ ನೀತಿ (National Plan for Technical Assistance)ಯಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಿತ್ತು. ಅದರಂತೆ ಕರ್ನಾಟಕದಿಂದ ಪ್ರಸ್ತಾವನೆಗಳನ್ನು ಪಂಚಾಯತ್ ರಾಜ್ ಮಂತ್ರಾಲಯಕ್ಕೆ ಸಲ್ಲಿಸಲಾಗಿ ಮೇಲೆ ಓದಲಾದ ಭಾರತ ಸರ್ಕಾರದ ಪತ್ರದ ಮೂಲಕ ಪ್ರಶಸ್ತಿಗಳನ್ನು ಘೋಷಣೆ ಮಾಡಲಾಗಿದೆ. ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ, ಮುಳಬಾಗಿಲು ತಾಲ್ಲೂಕು ಪಂಚಾಯತಿ (ಕೋಲಾರ ಜಿಲ್ಲೆ), ಹೊಸದುರ್ಗ ತಾಲ್ಲೂಕು ಪಂಚಾಯತಿ(ಚಿತ್ರದುರ್ಗ ಜಿಲ್ಲೆ) ಮತ್ತು ಸೇಡಂ (ಕಲಬುರಗಿ ಜಿಲ್ಲೆ) ತಾಲ್ಲೂಕು ಪಂಚಾಯತಿಗಳು, ಗುಮ್ಮಗೋಳ (ನವಲಗುಂದ ತಾಲ್ಲೂಕು, ಧಾರವಾಡ ಜಿಲ್ಲೆ), ಗಾಜನೂರು (ಶಿವಮೊಗ್ಗ ತಾಲ್ಲೂಕು ಮತ್ತು ಜಿಲ್ಲೆ), ಕೋಯಿಲಾ (ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಮತ್ತು ಕಣ್ಣೂರು (ಬೆಂಗಳೂರು ಪೂರ್ವ ತಾಲ್ಲೂಕು ಬೆಂಗಳೂರು ನಗರ ಜಿಲ್ಲೆ) ಗ್ರಾಮ ಪಂಚಾಯತಿಗಳು, ಭಾರತ ಸರ್ಕಾರದ ಪ್ರಶಸ್ತಿಗಳಿಗೆ ಭಾಜನವಾಗಿವೆ. ಈ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಒಟ್ಟು ರೂ. 118.00 ಲಕ್ಷಗಳು (ರೂಪಾಯಿ ಒಂದುನೂರ ಹದಿನೆಂಟು ಲಕ್ಷಗಳು ಮಾತ್ರ) ನಗದು ಬಹುಮಾನವನ್ನು ಘೋಷಿಸಲಾಗಿದೆ. ಘೋಷಿಸಲಾದ ನಗದು ಬಹುಮಾನವನ್ನು ಆಯಾ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವಿತರಿಸುವ ಕುರಿತು ಸರ್ಕಾರದ ಆದೇಶವನ್ನು ಹೊರಡಿಸುವ ಅಗತ್ಯವಿದೆ ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 322 ಜಿಪಸ 2014 ಬೆಂಗಳೂರು, ದಿನಾಂಕ: 01.11.2015**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿದ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅವುಗಳ ಮುಂದೆ ಕಾಣಿಸಿರುವ ಮೊತ್ತವನ್ನು ಅಂದರೆ ಒಟ್ಟು ರೂ.118.00(ಒಂದು ನೂರಾ ಹದಿನೆಂಟು ಲಕ್ಷಗಳು ಮಾತ್ರ) 2014-15ನೇ ಸಾಲಿಗೆ **ರಾಜೀವ್‌ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿ ರಾಷ್ಟ್ರೀಯ ತಾಂತ್ರಿಕ ಸಲಹಾ ನೀತಿಯನ್ವಯ (National Plan for Technical Assistance) ನಗದು ಬಹುಮಾನವಾಗಿ ವಿತರಿಸಲು** ಆದೇಶಿಸಿದೆ. ರಾಜೀವ್ ಗಾಂಧಿ ಪಂಚಾಯತಿ ಸಶಕ್ತಿಕರಣ ಅಭಿಯಾನ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ರಾಜ್ಯ ಸರ್ಕಾರದ ವತಿಯಿಂದ ಇಂದಿರಾ ನಗರ ದೇನಾ ಬ್ಯಾಂಕ್ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 05211002648 ಯಿಂದ ಪ್ರಶಸ್ತಿಗಳನ್ನು ಪಡೆದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ನಗದು ಬಹುಮಾನವನ್ನು ಅವುಗಳ 13ನೇ ಹಣಕಾಸು ಆಯೋಗದ ಅನುದಾನಕ್ಕಾಗಿ ತೆರೆದಿರುವ ಬ್ಯಾಂಕ್‌ಗಳ ಉಳಿತಾಯ ಖಾತೆಗಳಿಗೆ ವರ್ಗಾಯಿಸಲು ಆದೇಶಿಸಿದೆ. ಈ ಅನುದಾನವನ್ನು ಪಂಚಾಯತ್ ರಾಜ್ ಸಂಸ್ಥೆಗಳು ರಾಜೀವ್‌ಗಾಂಧಿ ಸಶಕ್ತೀಕರಣ ಯೋಜನೆಯಡಿ ಪ್ರತ್ಯೇಕವಾಗಿ ಖಾತೆಯನ್ನು ತೆರೆದು ಆ ಖಾತೆಯ ಮುಖಾಂತರ ಈ ಯೋಜನೆಯ ಅನುದಾನದ ವ್ಯವಹಾರವನ್ನು ನಡೆಸತಕ್ಕದ್ದು.

| ಕ್ರ.ಸಂ. | ಪ್ರಶಸ್ತಿಗಳನ್ನು ಗಳಿಸಿರುವ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳು | ಘೋಷಣೆ ಮಾಡಲಾದಂತೆ ವಿತರಿಸಲಾಗುತ್ತಿರುವ ನಗದು ಬಹುಮಾನ (ರೂ. ಲಕ್ಷಗಳಲ್ಲಿ) | 13ನೇ ಹಣಕಾಸು ಆಯೋಗ ಅನುದಾನದ ಉಳಿತಾಯ ಖಾತೆ ಸಂಖ್ಯೆ | ಬ್ಯಾಂಕ್‌ನ ಹೆಸರು ಮತ್ತು ಶಾಖೆ | ಐ.ಎಫ್.ಎಸ್ ಕೋಡ್ |
|---|---|---|---|---|---|
| | ಜಿಲ್ಲಾ ಪಂಚಾಯತಿ | | | | |
| 1 | ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ | 30.00 | 64059481010 | ಸ್ಟೇಟ್ ಬ್ಯಾಂಕ್ ಆಫ್ ಮೈಸೂರು | SBMY0040681 |
| | ತಾಲ್ಲೂಕು ಪಂಚಾಯತಿಗಳು | | | | |
| 1 | ಮುಳಬಾಗಿಲು ತಾಲ್ಲೂಕು ಪಂಚಾಯತಿ (ಕೋಲಾರ ಜಿಲ್ಲೆ) | 20.00 | 64059575861 | ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, | SBMY0040681 |
| 2 | ಹೊಸದುರ್ಗ ತಾಲ್ಲೂಕು ಪಂಚಾಯತಿ (ಚಿತ್ರದುರ್ಗ ಜಿಲ್ಲೆ) | 10.00 | 64059575511 | ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, | SBMY0040681 |
| 3 | ಸೇಡಂ ತಾಲ್ಲೂಕು ಪಂಚಾಯತಿ (ಕಲಬುರಗಿ ಜಿಲ್ಲೆ) | 10.00 | 62137087689 | ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ, | SBHY0020235 |
| | ಗ್ರಾಮ ಪಂಚಾಯತಿಗಳು | | | | |
| 1 | ಗುಮ್ಮಗೋಳ ಗ್ರಾಮ ಪಂಚಾಯತಿ (ನವಲಗುಂದ ತಾಲ್ಲೂಕು, ಧಾರವಾಡ ಜಿಲ್ಲೆ) | 12.00 | 115001011000847 | ವಿಜಯ ಬ್ಯಾಂಕ್, ಮೊರಬ ಶಾಖೆ | VIJB0001150 |
| 2 | ಗಾಜನೂರು ಗ್ರಾಮ ಪಂಚಾಯತಿ (ಶಿವಮೊಗ್ಗ ತಾಲ್ಲೂಕು ಮತ್ತು ಜಿಲ್ಲೆ) | 12.00 | 2562500100618701 | ಕರ್ನಾಟಕ ಬ್ಯಾಂಕ್, ಗಾಜನೂರು ಶಾಖೆ | KARB0000256 |
| 3 | ಕೋಯಿಲಾ ಗ್ರಾಮ ಪಂಚಾಯತಿ (ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) | 12.00 | 01402200148112 | ಸಿಂಡಿಕೇಟ್ ಬ್ಯಾಂಕ್, ಉಪ್ಪಿನಂಗಡಿ ಶಾಖೆ | SYNB0000140 |
| 4 | ಕಣ್ಣೂರು ಗ್ರಾಮ ಪಂಚಾಯತಿ (ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ) | 12.00 | 13201032712 | ಕಾವೇರಿ ಕಲ್ಪತರು ಗ್ರಾಮೀಣ ಬ್ಯಾಂಕ್, ಕಣ್ಣೂರು ಶಾಖೆ | SBMY0RRCKGB |

ಈ ಆದೇಶದ ಮೂಲಕ ಬಿಡುಗಡೆಗೊಳಿಸಲಾದ ಬಹುಮಾನದ ಮೊತ್ತವನ್ನು ಈ ಕೆಳಕಂಡ ಮಾರ್ಗಸೂಚಿಗಳ ಅನುಸಾರ ಮಾತ್ರವೇ ಕ್ರಮ ವಹಿಸತಕ್ಕದ್ದು.

1. ಕಾಮಗಾರಿಗಳ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999/2000 ಹಾಗೂ ಇದಕ್ಕೆ ಕಾಲಕಾಲಕ್ಕೆ ಮಾಡಲಾದ ಎಲ್ಲಾ ತಿದ್ದುಪಡಿಗಳ ಅನುಸಾರ ನೆರವೇರಿಸತಕ್ಕದ್ದು.
2. ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಿರುವ ಮೊತ್ತದಲ್ಲಿ ಈ ಪಂಚಾಯತ್ ಸಂಸ್ಥೆಗಳು ಶಾಶ್ವತ ಆಸ್ತಿ ಸೃಜನೆಯಾಗುವಂತಹ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಬಹುದು. ಈ ಆಸ್ತಿಗಳ ಸೃಜನೆಯಿಂದಾಗಿ ಪಂಚಾಯತ್ ಸಂಸ್ಥೆಗಳಿಗೆ ನಿಗಧಿತ ಆದಾಯ ಬರುವಂತ ಕಾಮಗಾರಿಗಳಿಗೆ ಹೆಚ್ಚು ಆದ್ಯತೆ ನೀಡಬಹುದು.
3. ಕಾಮಗಾರಿಗಳ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳುವುದು.
4. ನಗದು ಬಹುಮಾನವನ್ನು ಬಾಕಿ ಉಳಿಸದೇ ಬಿಡುಗಡೆಗೊಳಿಸಿದ ಪೂರ್ಣ ಮೊತ್ತಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಷ್ಠಾನಗೊಳಿಸತಕ್ಕದ್ದು. ಈ ಕ್ರಿಯಾ ಯೋಜನೆಯು ಆಯಾ ಪಂಚಾಯತಿ ಸಂಸ್ಥೆಯ ಆಯವ್ಯಯ ಮತ್ತು ಅಭಿವೃದ್ಧಿ ಯೋಜನೆಯ ಭಾಗವಾಗಿರಬೇಕು.
5. ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಗ್ರಾಮೀಣ ಪ್ರದೇಶದ ಜನರ ಜೀವನ ಮಟ್ಟವನ್ನು ಹೆಚ್ಚಿಸಲು ಅನುಕೂಲವಾಗುವಂತಹ ಕ್ಷೇತ್ರಗಳಾದ ಕುಡಿಯು ನೀರು, ನೈರ್ಮಲ್ಯ, ಶಿಕ್ಷಣ, ಆರೋಗ್ಯ, ಮಹಿಳೆ ಮತ್ತು ಮಕ್ಕಳ ಕಲ್ಯಾಣ, ಪೌಷ್ಟಿಕಾಂಶ ಸಂಬಂಧಿ ಚಟುವಟಿಕೆಗಳನ್ನು ಸೇರ್ಪಡೆಗೊಳಿಸಿಕೊಳ್ಳಬಹುದು.
6. ನಗದು ಬಹುಮಾನದ ಶೇಖಡ 25ರಷ್ಟನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವರ್ಗಗಳ ಕಲ್ಯಾಣಕ್ಕೆ ವಿನಿಯೋಗಿಸತಕ್ಕದ್ದು ಹಾಗೆಯೇ ಶೇಕಡ 3ರಷ್ಟನ್ನು ವಿಕಲಚೇತನರಿಗೆ ವಿನಿಯೋಗಿಸುವುದು.
7. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ (3) ಹಾಗೂ 3(ಎ) ಪ್ರಕಾರ ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಶಿಫಾರಸ್ಸುಗಳನ್ನು ಆದ್ಯತೆಗನುಸಾರ ಗ್ರಾಮ ಪಂಚಾಯತಿ ಸಭೆಯಲ್ಲಿ/ತಾಲ್ಲೂಕು ಪಂಚಾಯಿತಿ ಸಭೆಯಲ್ಲಿ/ಜಿಲ್ಲಾ ಪಂಚಾಯತಿ ಸಭೆಯಲ್ಲಿ ಅಭಿವೃದ್ಧಿ ಯೋಜನೆಯ ಅನುಮೋದನೆ ಪಡೆಯುವುದನ್ನು ಕಡ್ಡಾಯಗೊಳಿಸಿದೆ.
8. ಪ್ರಗತಿ ವರದಿಯನ್ನು ಹಾಗೂ ಹಣ ಬಳಕೆ ಪತ್ರ(ಜಿ.ಎಫ್.ಆರ್. 19–ಎ ನಮೂನೆ)ವನ್ನು ಪಂಚತಂತ್ರ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿ.ಬಲರಾಮ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ:

(1) ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
(2) ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
(3) ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.
(4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ.
(5) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು, ಮುಳಬಾಗಿಲು, ಸೇಡಂ ಮತ್ತು ಹೊಸದುರ್ಗ.

(6) ಪಂಚಾಯತಿ ಅಭಿವೃದ್ದಿ ಅಧಿಕಾರಿಗಳು, ಗುಮ್ಮಗೋಳ (ನವಲಗುಂದ ತಾಲ್ಲೂಕು, ಧಾರವಾಡ ಜಿಲ್ಲೆ), ಗಾಜನೂರು(ಶಿವಮೊಗ್ಗ ತಾಲ್ಲೂಕು ಮತ್ತು ಜಿಲ್ಲೆ), ಕೋಡಿಲಾ (ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ) ಮತ್ತು ಕಣ್ಣೂರು (ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ).

(7) ವಿಶೇಷಾಧಿಕಾರಿ, ಜಿಲ್ಲಾ ಪಂಚಾಯತಿ, ಆರ್ಥಿಕ ಇಲಾಖೆ, ಬೆಂಗಳೂರು.

(8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಗ್ರಾಅಪ)/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.

(9) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.

(10) ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.

(11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.